# **“ಪ್ರಕಟಣೆ”**

**ಪರಿಶಿಷ್ಟ ಜಾತಿ ಉಪ ಯೋಜನೆ (ಎಸ್.ಸಿ.ಎಸ್.ಪಿ) ಹಾಗೂ ಗಿರಿಜನ ಉಪ ಯೋಜನೆ (ಟಿ.ಎಸ್.ಪಿ) ಯೋಜನೆಯಡಿ** ಪರಿಶಿಷ್ಟ ಜಾತಿ(ಎಸ್.ಸಿ) ಮತ್ತು ಪರಿಶಿಷ್ಟ ಪಂಗಡ(ಎಸ್.ಟಿ)ಗಳ ಅಭ್ಯರ್ಥಿಗಳಿಗೆ **ಉಚಿತವಾಗಿ ಲಘು ಮತ್ತು ಭಾರಿ ವಾಹನ ಚಾಲನ ತರಬೇತಿ** ನೀಡಿ ಪ್ರಾದೇಶಿಕ ಸಾರಿಗೆ ಕಛೇರಿಯಿಂದ **ಚಾಲನ ಅನುಜ್ಞಾಪತ್ರ/ಬ್ಯಾಡ್ಜ್** ನೀಡುವ ಕಾರ್ಯಕ್ರಮವನ್ನು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಹಮ್ಮಿಕೊಳ್ಳಲಾಗಿದ್ದು, ಆಸಕ್ತ ಫಲಾಪೇಕ್ಷಿಗಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದ್ದು, ಸದರಿ ತರಬೇತಿಯನ್ನು ಪಡೆಯಲು ಇಚ್ಚಿಸುವ ಪರಿಶಿಷ್ಟ ಜಾತಿ(ಎಸ್.ಸಿ) ಮತ್ತು ಪರಿಶಿಷ್ಟ ಪಂಗಡ(ಎಸ್.ಟಿ)ಗಳ ಅಭ್ಯರ್ಥಿಗಳು ಹೊಂದಿರಬೇಕಾದ ಕನಿಷ್ಠ ಅರ್ಹತೆಗಳು/ ಸಲ್ಲಿಸಬೇಕಾಗಿರುವ ದಾಖಲಾತಿಗಳ ವಿವರ ಕೆಳಕಂಡಂತೆ ಇರುತ್ತದೆ.

➢ **ಲಘು ವಾಹನ ಚಾಲನಾ ತರಬೇತಿ (ಕಾರ್/ಜೀಪ್):**
- ಕನಿಷ್ಠ 18 ವರ್ಷ ವಯೋಮಿತಿ ತುಂಬಿರಬೇಕು. ಗರಿಷ್ಠ: 45 ವರ್ಷ.
- ಜನ್ಮ ದಿನಾಂಕದ ಬಗ್ಗೆ ಜನನ ಪ್ರಮಾಣಪತ್ರ ಅಥವಾ ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಅಥವಾ ಶಾಲಾ ವರ್ಗಾವಣಾ ಪ್ರಮಾಣ ಪತ್ರ ಅಥವಾ ನೋಟರಿಯಿಂದ ಪ್ರಮಾಣ ಪತ್ರ.
- ಆಧಾರ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ.
- ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ–5.

➢ **ಭಾರಿ ವಾಹನ ಚಾಲನಾ ತರಬೇತಿ (ಬಸ್):**
- ಕನಿಷ್ಠ 20 ವರ್ಷಗಳ ವಯೋಮಿತಿ ಪೂರೈಸಿರಬೇಕು.
- ಲಘು ವಾಹನ ಚಾಲನಾ ಅನುಜ್ಞಾಪತ್ರ ಪಡೆದು ಒಂದು ವರ್ಷ ಪೂರೈಸಿರಬೇಕು.
- ಜನ್ಮ ದಿನಾಂಕದ ಬಗ್ಗೆ ಜನನ ಪ್ರಮಾಣಪತ್ರ ಅಥವಾ ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಅಥವಾ ಶಾಲಾ ವರ್ಗಾವಣಾ ಪ್ರಮಾಣ ಪತ್ರ ಅಥವಾ ನೋಟರಿಯಿಂದ ಪ್ರಮಾಣ ಪತ್ರ.
- ಆಧಾರ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ.
- ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ–5.

❖ **ಅರ್ಹ ಎಸ್.ಸಿ/ಎಸ್.ಟಿ ಅಭ್ಯರ್ಥಿಗಳಿಗೆ ಲಘು/ಭಾರಿ ವಾಹನ ಚಾಲನಾ ತರಬೇತಿ (30 ದಿನಗಳು) ಮತ್ತು ತರಬೇತಿಯ ಅವಧಿಯಲ್ಲಿ ವಸತಿ ಮತ್ತು ಊಟೋಪಚಾರದ ವ್ಯವಸ್ಥೆಯನ್ನು ಉಚಿತವಾಗಿ ನೀಡಲಾಗುತ್ತದೆ.**

ಮೇಲಿನ ಅರ್ಹತೆ ಹೊಂದಿದ್ದು, ಆಸಕ್ತಿ ಇರುವ **ಪರಿಶಿಷ್ಟ ಜಾತಿ/ಪಂಗಡದ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳು** ತಮ್ಮ ಮೂಲ ದಾಖಲೆ ಮತ್ತು 02 ಸೆಟ್ ಜೆರಾಕ್ಸ್ ಪ್ರತಿಗಳೊಂದಿಗೆ ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, 3ನೇ ಮಹಡಿ, ಶಾಂತಿನಗರ ಬಸ್ ನಿಲ್ದಾಣ, ಬೆಂಗಳೂರು – 560027 ಇಲ್ಲಿ **ದಿನಾಂಕ: 01.08.2022 ರಿಂದ** ಹೆಸರು ನೋಂದಾಯಿಸಿಕೊಳ್ಳಬಹುದಾಗಿರುತ್ತದೆ ಹಾಗೂ ಹೆಚ್ಚಿನ ಮಾಹಿತಿಯನ್ನು ಸಂಸ್ಥೆಯ ವೆಬ್‌ಸೈಟ್ www.mybmtc.com ನಿಂದ ಪಡೆಯಬಹುದಾಗಿದೆ. ಈ ಸಂಬಂಧ ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆಗಳು: 080–22537481, 7760991086, 7760991348, 7760991190, 7760979980, 7892529634, 7760576556.

ವ್ಯವಸ್ಥಾಪಕ ನಿರ್ದೇಶಕರು
ಬೆಂ.ಮ.ಸಾ.ಸಂಸ್ಥೆ.